ಜೆಎಸ್‌ಎಸ್ ಮಹಾವಿದ್ಯಾಪೀಠ

# ಜೆಎಸ್‌ಎಸ್ ಮಹಿಳಾ ಕಾಲೇಜು

ಚಾಮರಾಜನಗರ ವಿಶ್ವವಿದ್ಯಾನಿಲಯಕ್ಕೆ ಸಂಯೋಜಿತ, ನ್ಯಾಕ್‌ನಿಂದ B+ (CGPA: 2.74) ಮಾನ್ಯತೆ ಪಡೆದಿದೆ

**ಕೊಳ್ಳೇಗಾಲ – 571 440 ಚಾಮರಾಜನಗರ ಜಿಲ್ಲೆ**

☎: 08224-252149    🖷: 08224-256051    jsscwk@gmail.com    www. jsscwkgl.org

**ಶ್ರೀಮತ್ಸುತ್ತೂರು ಜಗದ್ಗುರು ಶ್ರೀ ವೀರಸಿಂಹಾಸನ ಮಹಾಸಂಸ್ಥಾನ ಮಠದ ಶ್ರೀ ಮನ್ಮಹಾರಾಜ ರಾಜಗುರುತಿಲಕ ಪರಮಪೂಜ್ಯ ಜಗದ್ಗುರು ಡಾ.ಶ್ರೀ ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳವರ 111ನೆಯ ಜಯಂತಿ ಮಹೋತ್ಸವ**

**" ಜ್ಞಾನದ ಬೆಳಕನ್ನು ನೀಡಿದವರು ರಾಜೇಂದ್ರ ಶ್ರೀಗಳು"– ಪ್ರೊ ಹೆಚ್.ಬಿ. ದೇವಣ್ಣ**

ದಿನಾಂಕ 25-9-226 ರಂದು ಕೊಳ್ಳೇಗಾಲದ ಜೆಎಸ್‌ಎಸ್ ಶಿಕ್ಷಣ ಸಂಸ್ಥೆಗಳ ಸಮುಚ್ಚಯದಲ್ಲಿ ಶ್ರೀಮತ್ಸುತ್ತೂರು ಜಗದ್ಗುರು ಶ್ರೀ ವೀರಸಿಂಹಾಸನ ಮಹಾಸಂಸ್ಥಾನ ಮಠದ ಶ್ರೀಮನ್ಮಹಾರಾಜ ರಾಜಗುರುತಿಲಕ ಪರಮಪೂಜ್ಯ ಜಗದ್ಗುರು ಡಾ. ಶ್ರೀ ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳವರ 111ನೆಯ ಜಯಂತಿ ಮಹೋತ್ಸವ ಸಮಾರಂಭವನ್ನು ಆಯೋಜಿಸಲಾಗಿತ್ತು.

ಬೆಳಗ್ಗೆ 8-30 ಗಂಟೆಗೆ ಪೂಜ್ಯ ರಾಜೇಂದ್ರ ಶ್ರೀಗಳವರ ಭಾವಚಿತ್ರದ ಚಿನ್ನದ ರಥದ ಮೆರವಣಿಗೆಗೆ ಕೊಳ್ಳೇಗಾಲ ವಿಧಾನಸಭಾ ಸದಸ್ಯರಾದ ಶ್ರೀ.ಎ.ಆರ್. ಕೃಷ್ಣಮೂರ್ತಿರವರು, ಮಾಜಿ ಶಾಸಕರಾದ ಶ್ರೀಮತಿ ಪರಿಮಳ ನಾಗಪ್ಪನವರು, ಚಾಮುಲ್ ಅಧ್ಯಕ್ಷರಾದ ಶ್ರೀ.ಎಂ. ನಂಜುಂಡಸ್ವಾಮಿರವರು ಪುಷ್ಪಾರ್ಚನೆ ಮಾಡುವ ಮೂಲಕ ಚಾಲನೆ ನೀಡಿದರು. ಮೆರವಣಿಗೆಯು ಕಾಲೇಜಿನ ಆವರಣದಿಂದ ಪ್ರಾರಂಭವಾಗಿ ಕೊಳ್ಳೇಗಾಲದ ಪ್ರಮುಖ ಬೀದಿಗಳಲ್ಲಿ ಸಾಗಿತು. ಮೆರವಣಿಗೆಯು ನಂದಿಧ್ವಜ, ವೀರಗಾಸೆ ಹಾಗೂ ವಾದ್ಯವೃಂದದ ಮೆರುಗಿನಿಂದ ಅತ್ಯಂತ ವಿಜೃಂಭಣೆಯಿಂದ ನೆರವೇರಿತು.

ಶ್ರೀಮಠದ ಭಕ್ತರು, ಸಂಘ-ಸಂಸ್ಥೆಗಳ ಪದಾಧಿಕಾರಿಗಳು ಹಾಗೂ ಜೆಎಸ್‌ಎಸ್ ಶಿಕ್ಷಣ ಸಂಸ್ಥೆಯ ಸಿಬ್ಬಂದಿ ವರ್ಗದವರು ಮತ್ತು ವಿದ್ಯಾರ್ಥಿಗಳು ಮೆರವಣಿಗೆಯಲ್ಲಿ ಪಾಲ್ಗೊಂಡಿದ್ದರು.

ಬೆಳಗ್ಗೆ 11.30ಕ್ಕೆ ಸಭಾ ಕಾರ್ಯಕ್ರಮವನ್ನು ದೀಪ ಬೆಳಗಿಸುವ ಮೂಲಕ ಗಣ್ಯರು ಉದ್ಘಾಟನೆ ಮಾಡಿದರು. ಹನೂರಿನ ಯುವ ಮುಖಂಡರು ಹಾಗೂ ಉದ್ಯಮಿಗಳಾದ ಶ್ರೀ ಎಸ್. ನಿಶಾಂತ್‌ರವರು ಮಾತನಾಡುತ್ತಾ ಸುತ್ತೂರು ಕೇವಲ ಭೌಗೋಳಿಕವಾಗಿ ಮಾತ್ರವಲ್ಲ ಆಧ್ಯಾತ್ಮಿಕವಾಗಿ, ಸಾಂಸ್ಕೃತಿಕವಾಗಿ ಅನನ್ಯವಾದುದು. ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳವರ ಶ್ರಮದ ಫಲವಾಗಿ ಇಂದಿನ ಜೆಎಸ್‌ಎಸ್ ಶಿಕ್ಷಣ ಸಂಸ್ಥೆಗಳು ಜನ್ಮತಾಳಿವೆ. ಗ್ರಾಮೀಣ ಪ್ರದೇಶದ ಪ್ರತಿಭೆಗಳು ಅನಾವರಣಗೊಳ್ಳಲು ಶ್ರೀಗಳು ಕಾರಣಕರ್ತರಾಗಿದ್ದಾರೆ ಎಂದು ತಿಳಿಸಿದರು.

ಮೈಸೂರಿನ ಜೆಎಸ್‌ಎಸ್ ಕಾಲೇಜಿನ ಗೌರವ ಪ್ರಾಧ್ಯಾಪಕರಾದ ಪ್ರೊ. ಹೆಚ್.ಬಿ. ದೇವಣ್ಣನವರು ನುಡಿ ನಮನ ಸಲ್ಲಿಸುತ್ತಾ ಪೂಜ್ಯ ರಾಜೇಂದ್ರ ಶ್ರೀಗಳು ಸಮಾಜದ ಸ್ವತ್ತು. ಇವರ ಹಿಂದೆ ಅಗಾಧವಾದ ಪುಣ್ಯದ ಫಲವಿದೆ. ಸುತ್ತೂರು ಮಠದ ಗುರು ಪರಂಪರೆ ವಚನ ಸಾಹಿತ್ಯಕ್ಕೂ ಮೊದಲೇ ಜನ್ಮತಾಳಿ ಜನತೆಗೆ ಸಾಮಾಜಿಕ ಸಂದೇಶವನ್ನು ಸಾರುತ್ತಾ ಬಂದಿದ್ದಾರೆ. ಶ್ರೀಮಠದ ಹಿಂದಿನ ಗುರುಪರಂಪರೆಯ ತಪಸ್ಸಿನ ಫಲವಾಗಿ ರಾಜೇಂದ್ರ ಶ್ರೀಗಳು ತಮ್ಮ 12ನೇ ವರ್ಷಕ್ಕೆ ಅಪಾರ ಜವಾಬ್ದಾರಿಯನ್ನು ವಹಿಸಿಕೊಂಡಿದ್ದವರು. ಒಮ್ಮೆ ಬರಗಾಲದ ಸಂದರ್ಭದಲ್ಲಿ ಪಂಚಾಕ್ಷರಿ ಮಂತ್ರ ಉಚ್ಚರಿಸಿ ಮಳೆ ಬರಿಸಿದವರು ಎಂಬ ಐತಿಹ್ಯವಿದೆ. ಶ್ರೀ ಮಲೆ ಮಹಾದೇಶ್ವರರು ಬಂದು ಹೋಗಿರುವ ಪುಣ್ಯಭೂಮಿ ಸುತ್ತೂರು ಶ್ರೀಕ್ಷೇತ್ರವಾಗಿದೆ. ರಾಜೇಂದ್ರ ಶ್ರೀಗಳವರ ಆದರ್ಶಗಳು ನಮ್ಮೆಲ್ಲರಿಗೂ ಸದಾ ಪ್ರೇರಣೆಯಾಗಲಿ. ಅವರ ಸೇವಾ ಪರಂಪರೆ ಮುಂದಿನ ಪೀಳಿಗೆಗಳಿಗೂ ದಾರಿದೀಪವಾಗಲಿ ಎಂದು ಹೇಳಿದರು.

ಮುಖ್ಯ ಅತಿಥಿಗಳಾದ ಆಗಮಿಸಿದ್ದ ಮಾಜಿ ಶಾಸಕರಾದ ಶ್ರೀ ಎಸ್. ಬಾಲರಾಜು ಸುತ್ತೂರು ಗುರು ಪರಂಪರೆಯು ಗತಕಾಲದ ಇತಿಹಾಸವನ್ನು ಹೊಂದಿದೆ. ಈ ಪುಣ್ಯ ಭೂಮಿಯಲ್ಲಿ ಲಕ್ಷಾಂತರ ವಿದ್ಯಾರ್ಥಿಗಳು

ಶಿಕ್ಷಣ ಪಡೆದು ತಮ್ಮ ಭವಿಷ್ಯವನ್ನು ರೂಪಿಸಿಕೊಂಡಿದ್ದಾರೆ. ಸಮಾಜದ ಪ್ರತಿಯೊಬ್ಬರಿಗೂ ಶಿಕ್ಷಣದ ಅವಕಾಶ ದೊರೆಯಬೇಕು ಎಂಬ ಉದ್ದೇಶದಿಂದ ಶಿಕ್ಷಣ ಕ್ಷೇತ್ರಕ್ಕೆ ಮಹತ್ವದ ಕೊಡುಗೆ ನೀಡಿದ್ದಾರೆ. ರಾಜೇಂದ್ರಶ್ರೀಗಳು ತಮ್ಮ ಚಿನ್ನದ ಕರಡಿಗೆಯನ್ನು ಮಾರಿ ವಿದ್ಯಾರ್ಥಿಗಳ ಹಸಿವನ್ನು ನೀಗಿಸಿದವರು. ವಿದ್ಯಾರ್ಥಿಗಳ ಬಗ್ಗೆ ಅಪಾರ ಪ್ರೀತಿಯನ್ನು ಹೊಂದಿದ್ದು, ತಮ್ಮ ಇಡೀ ಜೀವನವನ್ನು ವಿದ್ಯಾರ್ಥಿಗಳ ಶ್ರೇಯಸ್ಸಿಗಾಗಿ ಮುಡುಪಾಗಿಟ್ಟವರು ಎಂದು ತಿಳಿಸಿದರು.

ಅಧ್ಯಕ್ಷತೆಯನ್ನು ವಹಿಸಿದ್ದ ಮಾಜಿ ಸಚಿವರಾದ ಶ್ರೀ ಎನ್. ಮಹೇಶ್ ಅವರು ರಾಜೇಂದ್ರ ಶ್ರೀಗಳವರು ಹೆಣ್ಣು ಮಕ್ಕಳ ಶಿಕ್ಷಣಕ್ಕೆ ನೀಡಿದ ಕೊಡುಗೆ ಗಮನಾರ್ಹವಾದದು. ಅನ್ನ, ಅಕ್ಷರ, ಆಶ್ರಯ ಎಂಬ ತ್ರಿವಿಧ ದಾಸೋಹಕ್ಕೆ ಪ್ರಾಮುಖ್ಯತೆ ಕೊಟ್ಟ ಮಾತೃ ಹೃದಯವುಳ್ಳವರು ರಾಜೇಂದ್ರ ಶ್ರೀಗಳು. ಬಡವರ ಬದುಕಿಗೆ ಶ್ರಮಿಸಿದ ಶ್ರೀಗಳ ವಿಚಾರ ಧಾರೆಗಳು ಹಾಗೂ ಶ್ರೀಗಳವರ ಶಿಕ್ಷಣ ಪ್ರೇಮ ಇಂದಿನ ಯುವ ಜನತೆಗೆ ಮಾದರಿಯಾಗಬೇಕೆಂದು ತಿಳಿಸಿದರು.

ಗುಂಡೇಗಾಲದ ಶ್ರೀ ಸಾಲೂರು ಶಾಖಾಮಠದ .ಷ.ಬ್ರ. ಶ್ರೀ ಮಲ್ಲಿಕಾರ್ಜುನ ಸ್ವಾಮಿಗಳು ಸುತ್ತೂರು ಮಠವು ಬಡವರಿಗೆ, ನಿರಾಶ್ರಿತರಿಗೆ ಆಶ್ರಯ ನೀಡಿ ವಿದ್ಯಾವಂತರನ್ನಾಗಿ ಮಾಡುತ್ತಿದೆ. ಲಕ್ಷಾಂತರ ವಿದ್ಯಾರ್ಥಿಗಳು ಜ್ಞಾನಾರ್ಜನೆಯನ್ನು ಪಡೆದು ಉನ್ನತ ಹುದ್ದೆಗಳನ್ನು ಅಲಂಕರಿಸಿದ್ದಾರೆ. ವಿದ್ಯೆ ಪ್ರತಿಯೊಬ್ಬರ ಆಸ್ತಿ. ಈ ಆಸ್ತಿಯನ್ನು ನೀಡುವಲ್ಲಿ ಸುತ್ತೂರು ಮಠ ಮುಂದಾಗಿದೆ. ತಂದೆ-ತಾಯಿಯರನ್ನು ಗೌರವಿಸಬೇಕು. ತಾವು ಓದಿದ ವಿದ್ಯಾಸಂಸ್ಥೆಗೆ ತಂದೆ-ತಾಯಿಗೆ ಕೀರ್ತಿಯನ್ನು ತರಬೇಕು, ನಡೆ-ನುಡಿ ಒಂದಾದ ಬದುಕು ನಮ್ಮದಾಗಬೇಕು ಎಂದು ತಮ್ಮ ಆಶೀರ್ವಚನವನ್ನು ದಯಪಾಲಿಸಿದರು.

ಕಾರ್ಯಕ್ರಮದಲ್ಲಿ 2025-26 ನೇ ಸಾಲಿನ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಲಾಯಿತು.

ಕನ್ನಡ ವಿಭಾಗದ ಮುಖ್ಯಸ್ಥರಾದ ಶ್ರೀ ಹೆಚ್.ಎಂ. ನಾಗಭೂಷಣರವರು ಪ್ರಾಧ್ಯಾಪಕರಿಗೆ ಹಾಗೂ ವಿದ್ಯಾರ್ಥಿಗಳಿಗೆ ಪ್ರತಿಜ್ಞಾವಿಧಿ ಬೋಧಿಸಿದರು.

ಪೂಜ್ಯ ರಾಜೇಂದ್ರ ಶ್ರೀಗಳವರ 111ನೆಯ ಜಯಂತಿ ಮಹೋತ್ಸವದ ಪ್ರಯುಕ್ತ ದಿನಾಂಕ 21-9-2026 ರಂದು ಅಧ್ಯಾಪಕರು ಹಾಗೂ ಅಧ್ಯಾಪಕೇತರ ನೌಕರರಿಗೆ ಸಾಂಪ್ರದಾಯಿಕ ಆಟೋಟಗಳನ್ನು ಆಯೋಜಿಸಲಾಗಿತ್ತು.

ದಿನಾಂಕ 23-9-2026 ರಂದು **"ದೇಹದಾನ ಶ್ರೇಷ್ಠದಾನ"** ಎಂಬ ವಿಷಯದ ಬಗ್ಗೆ ವಿದ್ಯಾರ್ಥಿಗಳಿಗೆ ಅರಿವು ಕಾರ್ಯಕ್ರಮವನ್ನು ಏರ್ಪಡಿಸಲಾಗಿತ್ತು.

ಕಾರ್ಯಕ್ರಮದಲ್ಲಿ ಪದವಿ ಕಾಲೇಜಿನ ಪ್ರಾಚಾರ್ಯರಾದ ಡಾ. ಹೆಚ್.ಎಸ್. ಕೊಂಗಳಪ್ಪ, ಪದವಿ ಪೂರ್ವ ಕಾಲೇಜಿನ ಪ್ರಾಚಾರ್ಯರಾದ ಎನ್. ಮಹದೇವಸ್ವಾಮಿ, ನರ್ಸಿಂಗ್ ಶಾಲೆಯ ಪ್ರಾಂಶುಪಾಲರಾದ ಶ್ರೀ ಹೇಮೇಶ್‌ಮೂರ್ತಿ, ಶಿಕ್ಷಣ ಸಂಸ್ಥೆಯ ಸಿಬ್ಬಂದಿ ವರ್ಗ, ವಿದ್ಯಾರ್ಥಿಗಳು ಹಾಗೂ ಸಂಘ ಸಂಸ್ಥೆಗಳ ಅಧ್ಯಕ್ಷರು, ಪದಾಧಿಕಾರಿಗಳು, ಶ್ರೀಮಠದ ಭಕ್ತರು ಉಪಸ್ಥಿತರಿದ್ದರು.



ಜೆಎಸ್‌ಎಸ್ ಶಿಕ್ಷಣ ಸಂಸ್ಥೆಗಳ ಸಮುಚ್ಚಯದಲ್ಲಿ ಶ್ರೀಮತ್ಸುತ್ತೂರು ಜಗದ್ಗುರು ಶ್ರೀ ವೀರಸಿಂಹಾಸನ ಮಹಾಸಂಸ್ಥಾನ ಮಠದ ಶ್ರೀಮನ್ಮಹಾರಾಜ ರಾಜಗುರುತಿಲಕ ಪರಮಪೂಜ್ಯ ಜಗದ್ಗುರು ಡಾ. ಶ್ರೀ ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳವರ 111ನೆಯ ಜಯಂತಿ ಮಹೋತ್ಸವದ ಉದ್ಘಾಟನಾ ಸಮಾರಂಭ. ಚಿತ್ರದಲ್ಲಿ ಪದವಿಪೂರ್ವ ಕಾಲೇಜಿನ ಪ್ರಾಂಶುಪಾಲರಾದ ಎನ್ ಮಹದೇವಸ್ವಾಮಿ, ಮಾಜಿ ಸಚಿವರಾದ ಶ್ರೀ ಎನ್. ಮಹೇಶ್‌ರವರು, ಗುಂಡೇಗಾಲದ ಶ್ರೀ ಸಾಲೂರು ಶಾಖಾಮಠದ.ಷ.ಬ್ರ. ಶ್ರೀ ಮಲ್ಲಿಕಾರ್ಜುನ ಸ್ವಾಮಿಗಳು, ಮಾಜಿ ಶಾಸಕರಾದ ಶ್ರೀ ಎಸ್. ಬಾಲರಾಜುರವರು, ಪದವಿ ಕಾಲೇಜಿನ ಪ್ರಾಚಾರ್ಯರಾದ ಡಾ. ಹೆಚ್.ಎಸ್. ಕೊಂಗಳಪ್ಪರವರು, ಮೈಸೂರಿನ ಜೆಎಸ್‌ಎಸ್ ಕಾಲೇಜಿನ ಗೌರವ ಪ್ರಾಧ್ಯಾಪಕರಾದ ಪ್ರೊ. ಹೆಚ್.ಬಿ. ದೇವಣ್ಣನವರು ಮತ್ತು ಕನ್ನಡ ವಿಭಾಗದ ಮುಖ್ಯಸ್ಥರಾದ ಶ್ರೀ ಹೆಚ್.ಎಂ. ನಾಗಭೂಷಣರವರು




ಜೆಎಸ್‌ಎಸ್ ಕಾಲೇಜಿನ ಗೌರವ ಪ್ರಾಧ್ಯಾಪಕರಾದ ಪ್ರೊ. ಹೆಚ್.ಬಿ. ದೇವಣ್ಣನವರು ಪೂಜ್ಯ ರಾಜೇಂದ್ರ ಶ್ರೀಗಳು ನುಡಿ ನಮನ ಸಲ್ಲಿಸುತ್ತಿರುವುದು. ಚಿತ್ರದಲ್ಲಿ ಶಾಸಕರಾದ ಶ್ರೀ ಎಸ್. ಬಾಲರಾಜುರವರು, ಮಾಜಿ ಸಚಿವರಾದ ಶ್ರೀ ಎನ್. ಮಹೇಶ್‌ರವರು, ಗುಂಡೇಗಾಲದ ಶ್ರೀ ಸಾಲೂರು ಶಾಖಾಮಠದ.ಷ.ಬ್ರ. ಶ್ರೀ ಮಲ್ಲಿಕಾರ್ಜುನ ಸ್ವಾಮಿಗಳು, ಹನೂರಿನ ಯುವ ಮುಖಂಡರು ಹಾಗೂ ಉದ್ಯಮಿಗಳಾದ ಶ್ರೀ ಎಸ್. ನಿಶಾಂತ್‌ರವರು



ಕಾರ್ಯಕ್ರಮದಲ್ಲಿ ಭಾಗವಹಿಸಿರುವ ಶಿಕ್ಷಣ ಸಂಸ್ಥೆಯ ಸಿಬ್ಬಂದಿ ವರ್ಗದವರು, ವಿದ್ಯಾರ್ಥಿಗಳು, ಹಾಗೂ ಸಂಘ ಸಂಸ್ಥೆಗಳ ಅಧ್ಯಕ್ಷರು, ಪದಾಧಿಕಾರಿಗಳು, ಶ್ರೀಮಠದ ಭಕ್ತರು

# ರಾಜೇಂದ್ರ ಶ್ರೀ ಜಯಂತಿ ರಥಯಾತ್ರೆಗೆ ಶಾಸಕ ಚಾಲನೆ

**ವಿಕ ಸುದ್ದಿಲೋಕ ಕೊಳ್ಳೇಗಾಲ**

ಜೆಎಸ್‌ಎಸ್ ವಿದ್ಯಾಪೀಠ ಹಾಗೂ ಜೆಎಸ್‌ಎಸ್ ಶಿಕ್ಷಣ ಸಂಸ್ಥೆಗಳ ಸಹಯೋಗದಲ್ಲಿ ಜಗದ್ಗುರು ಶಿವರಾತ್ರಿ ರಾಜೇಂದ್ರ ಸ್ವಾಮೀಜಿ 111ನೇ ಜಯಂತಿ ಮಹೋತ್ಸವದ ಅಂಗವಾಗಿ ಹಮ್ಮಿಕೊಂಡಿದ್ದ ರಥಯಾತ್ರೆಗೆ ಶಾಸಕ ಎ.ಆರ್. ಕೃಷ್ಣಮೂರ್ತಿ ಚಾಲನೆ ನೀಡಿದರು.

ಪಟ್ಟಣದ ಜೆಎಸ್‌ಎಸ್ ಕಾಲೇಜಿನಲ್ಲಿ ಶುಕ್ರವಾರ ಆಯೋಜಿಸಿದ್ದ ಅಲಂಕೃತಗೊಂಡಿದ್ದ ಬೆಳ್ಳಿರಥದಲ್ಲಿ ರಾಜೇಂದ್ರ ಸ್ವಾಮೀಜಿ ಭಾವಚಿತ್ರ ಇರಿಸಿ ಪೂಜೆ ಸಲ್ಲಿಸಿ, ನಂತರ ಶಾಸಕರು ಪುಷ್ಪನಮನ ಸಲ್ಲಿಸುವ ಮೂಲಕ ಚಾಲನೆ ನೀಡಿ ಮಾತನಾಡಿ, ''ಸುತ್ತೂರು ರಾಜೇಂದ್ರ ಶ್ರೀಗಳು ಗ್ರಾಮೀಣ ಭಾಗದ ಹೆಣ್ಣು ಮಕ್ಕಳ ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆ ನೀಡಿದ್ದರು,'' ಎಂದು ಹೇಳಿದರು.

ಜೆಎಸ್‌ಎಸ್ ಕಾಲೇಜಿನಿಂದ ಹೊರಟ ರಥ ಡಾ.ಅಂಬೇಡ್ಕರ್ ರಸ್ತೆ, ಡಾ.ರಾಜಕುಮಾರ ರಸ್ತೆ, ವಾಸವಿ ಮಹಲ್ ರಸ್ತೆ, ಐಬಿ ರಸ್ತೆ ಮೂಲಕ ವಿವಿಧ ಕಲಾತಂಡಗಳ ಜತೆಯಲ್ಲಿ ಮೆರವಣಿಗೆ ನಡೆಯಿತು. ಮೆರವಣಿಗೆಯಲ್ಲಿ ಮಾಜಿ ಶಾಸಕಿ ಪರಿಮಳಾ ನಾಗಪ್ಪ, ಚಾಮುಲ್ ಅಧ್ಯಕ್ಷರು ನಂಜುಂಡಸ್ವಾಮಿ, ವೀರಶೈವ ಮಹಾಸಭೆ ತಾಲೂಕು ಅಧ್ಯಕ್ಷ ತಿಮ್ಮರಾಜೀಪುರ ಪುಟ್ಟಣ್ಣ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರು ತೋಟೇಶ್ ಹಾಗೂ ಇತರರು ಇದ್ದರು.

ಮೆರವಣಿಗೆಯ ನಂತರ ಕಾಲೇಜು ಆವರಣದಲ್ಲಿ ನಡೆದ ಕಾರ್ಯಕ್ರಮದ ಸಾನ್ನಿಧ್ಯವನ್ನು ಗುಂಡೇಗಾಲ ಮಠದ ಮಲ್ಲಿಕಾರ್ಜುನ ಸ್ವಾಮೀಜಿ ವಹಿಸಿದ್ದರು. ಕಾರ್ಯಕ್ರಮದಲ್ಲಿ ಮಾಜಿ ಸಚಿವ ಎನ್. ಮಹೇಶ್, ಮಾಜಿ ಶಾಸಕ ಎಸ್.ಬಾಲರಾಜು, ಹನೂರು ಮುಖಂಡ ನಿಶಾಂತ್, ಮೈಸೂರಿನ ಜೆಎಸ್‌ಎಸ್ ಕಾಲೇಜು ಪ್ರಾಧ್ಯಾಪಕ ಪ್ರೊ. ಎಚ್.ಬಿ.ದೇವಣ್ಣ ಹಾಗೂ ಇತರರು ಇದ್ದರು.



**ಕೊಳ್ಳೇಗಾಲ ಪಟ್ಟಣದಲ್ಲಿ ಜಗದ್ಗುರು ಶಿವರಾತ್ರಿ ರಾಜೇಂದ್ರ ಸ್ವಾಮೀಜಿ 111ನೇ ಜಯಂತಿ ಮಹೋತ್ಸವದ ರಥಯಾತ್ರೆಗೆ ಶಾಸಕ ಎ.ಆರ್. ಕೃಷ್ಣಮೂರ್ತಿ ಚಾಲನೆ ನೀಡಿದರು.**

ಹೊಸ ದಿಗಂ
09

ಕಿರುಸುದ್ದಿ

## ರಥೋತ್ಸವಕ್ಕೆ ಚಾಲನೆ

• **ಕೊಳ್ಳೇಗಾಲ:** ಜೆಎಸ್‌ಎಸ್ ವಿದ್ಯಾಪೀಠ ಹಾಗೂ ಜೆಎಸ್‌ಎಸ್ ಶಿಕ್ಷಣ ಸಂಸ್ಥೆಗಳು ಇವರ ಸಹಯೋಗದೊಂದಿಗೆ ಪರಮಪೂಜ್ಯ ಜಗದ್ಗುರು ಡಾ.ಶ್ರೀ ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳ 111 ನೇ ಜಯಂತಿ ಮಹೋತ್ಸವದ ಅಂಗವಾಗಿ ಹಮ್ಮಿಕೊಂಡಿದ್ದ ರಥೋತ್ಸವವನ್ನು ಶಾಸಕ ಎ.ಆರ್.ಕೃಷ್ಣಮೂರ್ತಿ ಅವರು ಚಾಲನೆ ನೀಡಿದರು. ಪಟ್ಟಣದ ಜೆಎಸ್‌ಎಸ್ ಮಹಿಳಾ ಕಾಲೇಜಿನಲ್ಲಿ ಶುಕ್ರವಾರ ಆಯೋಜಿಸಿದ್ದ ಅಲಂಕೃತಗೊಂಡಿದ್ದ ಬೆಳ್ಳಿರಥದಲ್ಲಿ ಶ್ರೀ ರಾಜೇಂದ್ರ ಮಹಾಸ್ವಾಮಿಗಳ ಫೋಟೋ ಇಟ್ಟು ಪೂಜೆ ಸಲ್ಲಿಸಿ, ನಂತರ ಶಾಸಕರು ಪುಷ್ಪನಮನ ಸಲ್ಲಿಸುವ ಮೂಲಕ ಚಾಲನೆ ನೀಡಿ ಮಾತನಾಡಿ, ಪರಮಪೂಜ್ಯ ಡಾ. ಶಿವರಾತ್ರಿ ರಾಜೇಂದ್ರ ಸ್ವಾಮೀಜಿಗಳ ನುಡಿದಂತೆ ನಡೆದು ನಿಸ್ವಾರ್ಥ ಸೇವೆಯನ್ನು ಸಲ್ಲಿಸಿದ್ದಾರೆ. ವಿಶ್ವಾದ್ಯಾಂತ ನಿಂತಿರುವ ಜೆಎಸ್‌ಎಸ್ ಮಹಾವಿದ್ಯಾಪೀಠದ ಎಲ್ಲಾ ಸಂಸ್ಥೆಗಳಿಗೆ ಮೂಲ ಕಾರಣ ರಾಜೇಂದ್ರ ಶ್ರೀಗಳ ದೂರದೃಷ್ಟಿ ಮತ್ತು ಕ್ರಿಯಾಶೀಲತೆಯೇ ಕಾರಣ ಎಂದು ತಿಳಿಸಿದರು. ಬಳಿಕ ಜೆಎಸ್‌ಎಸ್ ಕಾಲೇಜು ನಿಂದ ಹೊರಟ ರಥೋತ್ಸವ ಡಾ.ಅಂಬೇಡ್ಕರ್ ರಸ್ತೆ, ಡಾ.ರಾಜಕುಮಾರ್ ರಸ್ತೆ, ವಾಸವಿ ಮಹಲ್ ರಸ್ತೆ, ಐಬಿ ರಸ್ತೆ ಮೂಲಕ ವಿವಿಧ ಕಲಾತಂಡಗಳ ಜೊತೆಯಲ್ಲಿ ಮೆರವಣಿಗೆ ವಿಜೃಂಭಣೆಯಿಂದ ನಡೆಯಿತು. ಮೆರವಣಿಗೆಯಲ್ಲಿ ಮಾಜಿ ಶಾಸಕಿ ಪರಿಮಳಾ ನಾಗಪ್ಪ, ಚಾಮುಲ್ ಅಧ್ಯಕ್ಷರು ನಂಜುಂಡಸ್ವಾಮಿ, ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭೆ ಅಧ್ಯಕ್ಷರು ತಿಮ್ಮರಾಜೀಪುರ ಪುಟ್ಟಣ್ಣ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರು ತೋಟೇಶ್, ಹಾಗೂ ಇತರರು ಇದ್ದರು. ಮೆರವಣಿಗೆಯ ನಂತರ ಕಾಲೇಜು ಆವರಣದಲ್ಲಿ ನಡೆದ ಕಾರ್ಯಕ್ರಮ ಗುಂಡೇಗಾಲ ಸಾಲೂರು ಮಠದ ಶ್ರೀ ಮಲ್ಲಿಕಾರ್ಜುನ ಸ್ವಾಮಿಗಳು ದಿವ್ಯಸಾನಿಧ್ಯ ವಹಿಸಿ ಮಾತನಾಡಿ, ದೇಶದ ಮಹನೀಯರು ಜಯಂತಿಯನ್ನು ಆಚರಿಸುವುದು ಮಹನೀಯರ ರೀತಿಯಲ್ಲಿ ನಡೆದರೇ ಜೀವನ ಸಾರ್ಥಕ ಎಂದು ಇಂದು ಶ್ರೀ ರಾಜೇಂದ್ರ ಮಹಾಸ್ವಾಮಿಗಳ ಜಯಂತಿಯನ್ನು ಆಚರಿಸಲಾಗಿದೆ ಎಂದರು. ರಾಜೇಂದ್ರ ಮಹಾಸ್ವಾಮಿಗಳು ಅನ್ನ ದಾಸೋಹ, ಅಕ್ಷರ ದಾಸೋಹ, ಜ್ಞಾನ ದಾಸೋಹ ಎಂಬ ತ್ರಿವಿಧ ದಾಸೋಹದ ಮೂಲಕ ದೇಶ ವಿದೇಶಗಳಲ್ಲೂ ಶಿಕ್ಷಣ ಕ್ರಾಂತಿಯನ್ನು ಉಂಟು ಮಾಡಿರುವ ಶ್ರೀಮಠದ ಆಶ್ರಯದಲ್ಲಿ ಲಕ್ಷಾಂತರ ಜನ ಉತ್ತಮ ಶಿಕ್ಷಣ ಮತ್ತು ಸಂಸ್ಕಾರವನ್ನು ಪಡೆದಿದ್ದಾರೆ. ಇವರ ಮಾರ್ಗದರ್ಶನದಲ್ಲಿ ಎಲ್ಲರೂ ನಡೆಯೋಣ ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ಮಾಜಿ ಸಚಿವ ಎನ್.ಮಹೇಶ್, ಮಾಜಿ ಶಾಸಕ ಎಸ್.ಬಾಲರಾಜು, ಹನೂರು ಮುಖಂಡ ನಿಶಾಂತ್, ಮೈಸೂರಿನ ಜೆಎಸ್‌ಎಸ್ ಕಾಲೇಜು ಪ್ರಾಧ್ಯಾಪಕರು ಪ್ರೊ.ಹೆಚ್.ಬಿ.ದೇವಣ್ಣ ಹಾಗೂ ಇತರರು ಇದ್ದರು.

ಸುದ್ದಿ ಸಿಂಚನ

## ಶಿವರಾತ್ರಿ ಶ್ರೀ 111ನೇ ಜಯಂತಿ ಸಂಭ್ರಮ: ರಥೋತ್ಸವಕ್ಕೆ ಚಾಲನೆ

ಕೊಳ್ಳೇಗಾಲ: ಜೆಎಸ್‌ಎಸ್ ವಿದ್ಯಾಪೀಠ ಹಾಗೂ ಜೆಎಸ್‌ಎಸ್ ಶಿಕ್ಷಣ ಸಂಸ್ಥೆಗಳಿಂದ ಜಗದ್ಗುರು ಡಾ.ಶ್ರೀ ಶಿವರಾತ್ರಿ ರಾಜೇಂದ್ರ ಸ್ವಾಮೀಜಿ 111ನೇ ಜಯಂತಿ ಮಹೋತ್ಸವದ ಅಂಗವಾಗಿ ಹಮ್ಮಿಕೊಂಡಿದ್ದ ರಥೋತ್ಸವಕ್ಕೆ ಶಾಸಕ ಎ.ಆರ್.ಕೃಷ್ಣಮೂರ್ತಿ ಶುಕ್ರವಾರ ಚಾಲನೆ ನೀಡಿದರು. ಪಟ್ಟಣದ ಜೆಎಸ್‌ಎಸ್ ಕಾಲೇಜಿನಲ್ಲಿ ಶುಕ್ರವಾರ ಆಯೋಜಿಸಿದ್ದ ಅಲಂಕೃತಗೊಂಡಿದ್ದ ಬೆಳ್ಳಿರಥದಲ್ಲಿ ಶ್ರೀ.ರಾಜೇಂದ್ರ ಶ್ರೀಗಳ ಫೋಟೋ ಇಟ್ಟು ಪೂಜೆ ಸಲ್ಲಿಸಿ, ನಂತರ ಶಾಸಕರು ಪುಷ್ಪನಮನ ಸಲ್ಲಿಸುವ ಮೂಲಕ ಚಾಲನೆ ನೀಡಿ ಮಾತನಾಡಿ, ಸುತ್ತೂರು ಶ್ರೀ ರಾಜೇಂದ್ರ ಮಹಾಸ್ವಾಮಿಗಳವ ತತ್ವಾದರ್ಶಗಳು ಯುವ ಪೀಳಿಗೆಗೆ ಅರ್ಥೈಸಿಕೊಳ್ಳಬೇಕು ಎಂದರು. ಬಳಿಕ ಜೆಎಸ್‌ಎಸ್ ಕಾಲೇಜಿನಿಂದ ಹೊರಟ ರಥೋತ್ಸವ ಡಾ. ಅಂಬೇಡ್ಕರ್‌ರಸ್ತೆ, ಡಾ.ರಾಜ್‌ಕುಮಾರ್ ರಸ್ತೆ, ವಾಸವಿ ಮಹಲ್ ರಸ್ತೆ, ಐಬಿ ರಸ್ತೆ ಮೂಲಕ ವಿವಿಧ ಕಲಾತಂಡಗಳ ಜೊತೆಯಲ್ಲಿ ಮೆರವಣಿಗೆ ವಿಜೃಂಭಣೆಯಿಂದ ನಡೆಯಿತು. ಮಾಜಿ ಶಾಸಕಿ ಪರಿಮಳಾ ನಾಗಪ್ಪ, ಚಾಮುಲ್ ಅಧ್ಯಕ್ಷ ನಂಜುಂಡಸ್ವಾಮಿ, ಮಾಜಿ ಸಚಿವ ಎನ್.ಮಹೇಶ್, ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭೆ ಅಧ್ಯಕ್ಷ ತಿಮ್ಮರಾಜೀಪುರ ಪುಟ್ಟಣ್ಣ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ತೋಟೇಶ್, ಮಾಜಿ ಶಾಸಕ ಎಸ್.ಬಾಲರಾಜು, ಹನೂರು ಬಿಜೆಪಿ ನಾಯಕ ನಿಶಾಂತ್, ಗುಂಡೇಗಾಲ ಬಸಪ್ಪ ಇತರರು ಹಾಜರಿದ್ದರು.